ಪ್ರ-72 - (16)

**ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ. ಮರಿತಿಬ್ಬೇಗೌಡ ಇವರು ನಿಯಮ 72ರಡಿ ನೀಡಿರುವ ಗಮನ ಸೆಳೆಯುವ ಸೂಚನೆಗೆ ಮಾನ್ಯ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ ಸಚಿವರ ಹೇಳಿಕೆ**

**ಸೂಚನೆ:**

ಮಾನ್ಯ ವಿಧಾನಪರಿಷತ್ ಸದಸ್ಯರಾದ ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) ಇವರು ಸರ್ಕಾರಿ ಪದವಿ ಇಂಜಿನಿಯರಿಂಗ್ ಹಾಗೂ ಪಾಲಿಟೆಕ್ನಿಕ್ ಕಾಲೇಜುಗಳ ಬೋಧಕ ಸಿಬ್ಬಂದಿಗಳ ಹೊಸ ವರ್ಗಾವಣೆ ನೀತಿಯಿಂದ ವರ್ಗಾವಣೆಗೊಂಡಿರುವುದರಿಂದ ಉಂಟಾದ ಗಂಭೀರ ಸಮಸ್ಯೆ ಕುರಿತು ಮಾನ್ಯ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ ಸಚಿವರ ಗಮನ ಸೆಳೆಯ ಬಯಸುತ್ತೇನೆ.

**ಮಾನ್ಯ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ ಸಚಿವರ ಹೇಳಿಕೆ:**

- ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ 137 ಡಿಟಿಇ 2020 ದಿನಾಂಕ:29.01.2021 ಮತ್ತು 29.06.2021ಗಳಲ್ಲಿ ತಾಂತ್ರಿಕ ಶಿಕ್ಷಣ ಇಲಾಖೆ ಅಧೀನದಲ್ಲಿ ಬರುವ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಬೋಧಕರ (ಪ್ರಾಧ್ಯಾಪಕರು, ಸಹ/ಸಹಾಯಕ ಪ್ರಾಧ್ಯಾಪಕರು (ಗ್ರೂಪ್–ಎ), ಸಹಾಯಕ ಪ್ರಾಧ್ಯಾಪಕರು (ಗ್ರೂಪ್–ಬಿ), ಗ್ರಂಥಪಾಲಕರು ಮತ್ತು ಕ್ರೀಡಾ & ದೈಹಿಕ ಶಿಕ್ಷಣ ನಿರ್ದೇಶಕರು), ಸರ್ಕಾರಿ ಪಾಲಿಟೆಕ್ನಿಕ್ ಸಂಸ್ಥೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಉಪನ್ಯಾಸಕರು ಮತ್ತು ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳ ಬೋಧಕರ ವರ್ಗಾವಣೆ ಸಂಬಂಧ 'ಕರ್ನಾಟಕ ರಾಜ್ಯ ನಾಗರೀಕ ಸೇವೆಗಳು (ತಾಂತ್ರಿಕ ಶಿಕ್ಷಣ ಇಲಾಖೆಯ ಬೋಧಕ ಸಿಬ್ಬಂದಿ ವರ್ಗಾವಣೆ ನಿಯಂತ್ರಣ) ಅಧಿನಿಯಮ 2021ನ್ನು ಅಧಿಸೂಚಿಸಿದೆ.

- ಸದರಿ ಅಧಿಸೂಚನೆಗಳನ್ವಯ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಸರ್ಕಾರಿ ಪಾಲಿಟೆಕ್ನಿಕ್ ಮತ್ತು ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕರನ್ನು ವರ್ಗಾವಣೆ ನಿಯಮಗಳ ನಿಯಮ 4ರಲ್ಲಿ ತಿಳಿಸಿರುವಂತೆ ನಿಗದಿತ ಸೇವಾವಧಿಯನ್ನು ಪೂರೈಸಿ ಮಂಜೂರಾದ ಬೋಧಕರ ಹುದ್ದೆಗಳ ಶೇಕಡಾ 9ರ ಮಿತಿಗೊಳಪಟ್ಟು ಸಾರ್ವಜನಿಕ ಹಿತಾಸಕ್ತಿಯ ವರ್ಗಾವಣೆಗಳಡಿ ಹಾಗೂ ಶೇಕಡಾ 6ರ ಮಿತಿಗೊಳಪಟ್ಟು ಕೋರಿಕೆ ಮೇರೆಗೆ ಹೀಗೆ ಒಟ್ಟು ಶೇಕಡಾ 15 ರಷ್ಟು ಬೋಧಕರನ್ನು ವರ್ಗಾವಣೆ ಮಾಡಲು ಅವಕಾಶ ಕಲ್ಪಿಸಲಾಗಿದೆ.

- ಆಯುಕ್ತಾಲಯದ ಅಧಿಸೂಚನೆ ಸಂಖ್ಯೆ: ಡಿಟಿಇ 08 ಇಎಸ್‌ಟಿ (8) 2021 ದಿ:24.07.2021ರಲ್ಲಿ ತಾಂತ್ರಿಕ ಶಿಕ್ಷಣ ಇಲಾಖೆ ಅಧೀನದ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಸರ್ಕಾರಿ ಪಾಲಿಟೆಕ್ನಿಕ್ ಮತ್ತು ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳ ಕಾರ್ಯನಿರ್ವಹಿಸುತ್ತಿರುವ ಬೋಧಕರನ್ನು ಸಾರ್ವಜನಿಕ ಹಿತಾಸಕ್ತಿಯ ವರ್ಗಾವಣೆಗಳಡಿ ಹೊರಡಿಸಲಾದ ವರ್ಗಾವಣೆ ನಿಯಮಗಳ ನಿಯಮ 4ರಲ್ಲಿ ತಿಳಿಸಿರುವಂತೆ ನಿಗದಿತ ಸೇವಾವಧಿಯನ್ನು ಪೂರೈಸಿ ಮಂಜೂರಾದ ಬೋಧಕರ ಹುದ್ದೆಗಳ ಶೇಕಡಾ 9ರ ಮಿತಿಗೊಳಪಟ್ಟು ಹಾಗೂ ಕೋರಿಕೆ ಮೇರೆಗೆ ವರ್ಗಾವಣೆಗಳಡಿ ವರ್ಗಾವಣೆ ನಿಯಮಗಳ ನಿಯಮ 4ರಲ್ಲಿ ತಿಳಿಸಿರುವಂತೆ ನಿಗದಿತ ಸೇವಾವಧಿಯನ್ನು ಪೂರೈಸಿ ಮಂಜೂರಾದ ಬೋಧಕರ ಶೇಕಡಾ 6ರ ಮಿತಿಗೊಳಪಟ್ಟು ಉಳಿದ ಮೂಲವೃಂದ ಮತ್ತು ಕಲ್ಯಾಣ ಕರ್ನಾಟಕ ಸ್ಥಳೀಯ ಮೂಲ ವೃಂದದ ವಲಯವಾರು ಅಂತಿಮ ಪಟ್ಟಿ, ವರ್ಗಾವಣೆ ವೇಳಾಪಟ್ಟಿ ಹಾಗೂ ಖಾಲಿ ಹುದ್ದೆಗಳ ವಿವರಗಳನ್ನು ಪ್ರಕಟಿಸಲಾಗಿತ್ತು.

- "ಕರ್ನಾಟಕ ರಾಜ್ಯ ನಾಗರೀಕ ಸೇವೆಗಳು (ತಾಂತ್ರಿಕ ಶಿಕ್ಷಣ ಇಲಾಖೆಯ ಬೋಧಕ ಸಿಬ್ಬಂದಿ ವರ್ಗಾವಣೆ ನಿಯಂತ್ರಣ) ಅಧಿನಿಯಮ 2021ರ ನಿಯಮ 2ರ ಉಪನಿಯಮ (1) (e)ರನ್ವಯ ತಾಂತ್ರಿಕ ಶಿಕ್ಷಣ ಇಲಾಖೆ ಅಧೀನದ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಸರ್ಕಾರಿ ಪಾಲಿಟೆಕ್ನಿಕ್ ಮತ್ತು ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕರನ್ನು ಗಣಕೀಕೃತ ಕೌನ್ಸೆಲಿಂಗ್ ಮುಖಾಂತರ ವರ್ಗಾವಣೆ ಮಾಡಲಾಗಿದೆ.

- "ಕರ್ನಾಟಕ ರಾಜ್ಯ ನಾಗರೀಕ ಸೇವೆಗಳು (ತಾಂತ್ರಿಕ ಶಿಕ್ಷಣ ಇಲಾಖೆಯ ಬೋಧಕ ಸಿಬ್ಬಂದಿ ವರ್ಗಾವಣೆ ನಿಯಂತ್ರಣ) ಅಧಿನಿಯಮ 2021ರ ನಿಯಮ 3ರನ್ವಯ ಎ.ಐ.ಸಿ.ಟಿ.ಇ ಪರಿಷ್ಕೃತ ಮಾರ್ಗಸೂಚಿಯನ್ವಯ ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನದಲ್ಲಿರುವ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ Student Faculty Ratio (SFR) ಅನುಪಾತ 1:20 ಸರ್ಕಾರಿ ಪಾಲಿಟೆಕ್ನಿಕ್ ಸಂಸ್ಥೆಗಳಲ್ಲಿ Student Faculty Ratio (SFR) ಅನುಪಾತ 1:25 ರಂತೆ ಹೆಚ್ಚುವರಿಯಾಗಿರುವ ಬೋಧಕ ಹುದ್ದೆಗಳನ್ನು ಗುರುತಿಸಿ Student Faculty Ratio (SFR) ರಂತೆ ಅಗತ್ಯವಿರುವ ಸಂಸ್ಥೆಗಳಿಗೆ ಬೋಧಕ ಹುದ್ದೆಗಳನ್ನು ಮರುಹಂಚಿಕೆ ಮಾಡಲಾಗಿದೆ.

- "ಕರ್ನಾಟಕ ರಾಜ್ಯ ನಾಗರೀಕ ಸೇವೆಗಳು (ತಾಂತ್ರಿಕ ಶಿಕ್ಷಣ ಇಲಾಖೆಯ ಬೋಧಕ ಸಿಬ್ಬಂದಿ ವರ್ಗಾವಣೆ ನಿಯಂತ್ರಣ) ಅಧಿನಿಯಮ 2021ರನ್ವಯ ತಾಂತ್ರಿಕ ಶಿಕ್ಷಣ ಇಲಾಖೆ ಅಧೀನದ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಸರ್ಕಾರಿ ಪಾಲಿಟೆಕ್ನಿಕ್ ಮತ್ತು ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕರು ನಿಗದಿತ ವೇಳಾಪಟ್ಟಿಯಂತೆ ಸಾರ್ವಜನಿಕ ಹಿತಾಸಕ್ತಿಯ

ವರ್ಗಾವಣೆಗಳಡಿ ಶೇಕಡಾ 9ರ ಮಿತಿಗೊಳಪಟ್ಟು ಹಾಗೂ ಕೋರಿಕೆ ಮೇರೆಗೆ ವರ್ಗಾವಣೆಗಳಡಿ ಶೇಕಡಾ 6ರ ಮಿತಿಗೊಳಪಟ್ಟು ಉಳಿದ ಮೂಲವೃಂದ ಮತ್ತು ಕಲ್ಯಾಣ ಕರ್ನಾಟಕ ಸ್ಥಳೀಯ ಮೂಲ ವೃಂದದ ವಲಯವಾರು ಗಣಕೀಕೃತ ಕೌನ್ಸೆಲಿಂಗ್‌ನಲ್ಲಿ ಭಾಗವಹಿಸಿ ತಮಗೆ ಬೇಕಾದ ಸ್ಥಳಗಳನ್ನು ಆಯ್ಕೆ ಮಾಡಿಕೊಂಡಿರುತ್ತಾರೆ.

- "ಕರ್ನಾಟಕ ರಾಜ್ಯ ನಾಗರೀಕ ಸೇವೆಗಳು (ತಾಂತ್ರಿಕ ಶಿಕ್ಷಣ ಇಲಾಖೆಯ ಬೋಧಕ ಸಿಬ್ಬಂದಿ ವರ್ಗಾವಣೆ ನಿಯಂತ್ರಣ) ಅಧಿನಿಯಮ 2021ರನ್ವಯ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಒಟ್ಟು 74, ಸರ್ಕಾರಿ ಪಾಲಿಟೆಕ್ನಿಕ್‌ಗಳಲ್ಲಿ ಒಟ್ಟು 333 ಹಾಗೂ ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳಲ್ಲಿ ಒಟ್ಟು 05 ಹೀಗೆ ಒಟ್ಟು 412 ಬೋಧಕರನ್ನು ಗಣಕೀಕೃತ ಕೌನ್ಸೆಲಿಂಗ್ ಮುಖಾಂತರ ವರ್ಗಾವಣೆ ಮಾಡಲಾಗಿದೆ.

- 2021–22ನೇ ಸಾಲಿಗೆ "ಕರ್ನಾಟಕ ರಾಜ್ಯ ನಾಗರೀಕ ಸೇವೆಗಳು (ತಾಂತ್ರಿಕ ಶಿಕ್ಷಣ ಇಲಾಖೆಯ ಬೋಧಕ ಸಿಬ್ಬಂದಿ ವರ್ಗಾವಣೆ ನಿಯಂತ್ರಣ) ಅಧಿನಿಯಮ 2021ರನ್ವಯ ತಾಂತ್ರಿಕ ಶಿಕ್ಷಣ ಇಲಾಖೆ ಅಧೀನದಲ್ಲಿ ಬರುವ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಸರ್ಕಾರಿ ಪಾಲಿಟೆಕ್ನಿಕ್ ಮತ್ತು ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕರನ್ನು ಗಣಕೀಕೃತ ಕೌನ್ಸೆಲಿಂಗ್ ಮುಖಾಂತರ ಪಾರದರ್ಶಕವಾಗಿ ಬೋಧಕರು ಆಯ್ಕೆ ಮಾಡಿಕೊಂಡ ಸ್ಥಳಗಳಿಗೆ ವರ್ಗಾವಣೆ ಮಾಡಿದ್ದು, ಅದರಂತೆ ಕರ್ತವ್ಯನಿರ್ವಹಿಸುತ್ತಿದ್ದಾರೆ. ಅದ್ದರಿಂದ ಸರ್ಕಾರಿ ಇಂಜಿನಿಯರಿಂಗ್ ಹಾಗೂ ಪಾಲಿಟೆಕ್ನಿಕ್ ಕಾಲೇಜುಗಳ ಹೊಸ ವರ್ಗಾವಣೆ ನೀತಿಯಿಂದ ವರ್ಗಾವಣೆಗೊಂಡ ಬೋಧಕ ಸಿಬ್ಬಂದಿಗಳಿಗೆ ಸಮಸ್ಯೆಯಾಗಿರುವುದಿಲ್ಲ.

**ಇಡಿ 247 ಟಿಇಸಿ 2021**

(ಡಾ॥ ಅಶ್ವತ್ಥ್ ನಾರಾಯಣ ಸಿ.ಎನ್.)
ಉನ್ನತ ಶಿಕ್ಷಣ, ಐಟಿ&ಬಿಟಿ, ವಿಜ್ಞಾನ ಮತ್ತು ತಂತ್ರಜ್ಞಾನ,
ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ
ಜೀವನೋಪಾಯ ಇಲಾಖೆ ಸಚಿವರು